ಐ) ಸಾಗುವಳಿ ವೆಚ್ಚ ಕಡಿಮೆ ಮಾಡಲು ಸಾವಯವ ಕೃಷಿ ಮತ್ತು ಜೀವಾಣು ಗೊಬ್ಬರ ಪ್ರೋತ್ಸಾಹ.

ಐ) ಮಣ್ಣು ಪರೀಕ್ಷೆಯ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ.

ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿರುವಂತಹ 6 ಜಿಲ್ಲೆಗಳಾದ ಶಿವಮೊಗ್ಗ, ಚಿತ್ರದುರ್ಗ, ಬೆಳಗಾಂ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಭಾರತ ಸರ್ಕಾರದ ವಿಶೇಷ ಪ್ಯಾಕೇಜ್.

711 (1211) ಶ್ರೀ ಧ್ರುವನಾರಾಯಣ್ ಆರ್. (ಸಂತೇಮರಳ್ಳಿ) :– ಸಹಕಾರ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಹಕಾರ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ?

ಆ) ಸದಸ್ಯರಿಂದ ಹಣ ಸಂಗ್ರಹಿಸಿ ನಿವೇಶನ ಹಂಚದಿರುವ ಗೃಹ ನಿರ್ಮಾಣ ಸಹಕಾರ ಸಂಘಗಳೆಷ್ಟು ?

ಇ) ಈ ಅನಾನುಕೂಲತೆಗಳನ್ನು ತಪ್ಪಿಸಲು ಸರ್ಕಾರದ ಕ್ರಮವೇನು ?

ಶ್ರೀ ಜಿ. ಟಿ. ದೇವೇಗೌಡ (ಸಹಕಾರ ಸಚಿವರು) :–

ಅ) ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ 195.

ಆ) 49 ಗೃಹ ನಿರ್ಮಾಣ ಸಹಕಾರ ಸಂಘಗಳು ಸದಸ್ಯರಿಂದ ಹಣ ಸಂಗ್ರಹಿಸಿ ನಿವೇಶನ ಹಂಚಿರುವುದಿಲ್ಲ.

ಇ) ಈ ಬಗ್ಗೆ ಸಂಬಂಧಪಟ್ಟ ಸಹಕಾರ ಸಂಘಗಳು ಸದಸ್ಯರಿಗೆ ನಿವೇಶನ ನೀಡಲು ಕ್ರಮವಿಡಬೇಕಾಗಿದೆ. ಸಹಕಾರ ಸಂಘಗಳು ನಿವೇಶನ ಹಂಚಿಕೆಗಾಗಿ ಅಗತ್ಯವಿರುವ ಭೂಮಿಯನ್ನು ಪಡೆಯಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವನ್ನು ಸಂಪರ್ಕಿಸಬಹುದಾಗಿದೆ.

713 (719) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) :– ಸಹಕಾರ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸರ್ಕಾರದ ಅವೈಜ್ಞಾನಿಕ ಸಾಲ ಮನ್ನಾ ಯೋಜನೆಯಿಂದ ಜಿಲ್ಲಾ ಮಟ್ಟದ ಸಹಕಾರ ಬ್ಯಾಂಕುಗಳು ದಿವಾಳಿ ಅಂಚಿಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ರಾಜ್ಯ ಸರ್ಕಾರವು ರೈತರ ಯಾವ ಯಾವ ಸಾಲವನ್ನು ಮನ್ನಾ ಮಾಡಿದೆ? ಇವುಗಳ ಒಟ್ಟು ಮೊತ್ತ ಎಷ್ಟು ?